ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

3. ಪ್ರಸ್ತಾವದ ಅಂಗೀಕಾರ

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

4. ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕ, 2011

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಉನ್ನತ ಶಿಕ್ಷಣ, ಯೋಜನಾ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಸ್. ಸುರೇಶ್ ಕುಮಾರ್, ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಉನ್ನತ ಶಿಕ್ಷಣ ಸಚಿವರ ಪರವಾಗಿ): ಈ ವಿಧೇಯಕವನ್ನು ಕಳೆದ ಅಧಿವೇಶನದಲ್ಲಿಯೇ ಚರ್ಚೆಗೆ ತೆಗೆದುಕೊಳ್ಳಬೇಕು, ಇದಕ್ಕೆ ಅನುಮೋದನೆ ಪಡೆಯಬೇಕೆಂದು ಪ್ರಯತ್ನ ಪಟ್ಟೆವು. ನಮ್ಮ ವಿರೋಧ ಪಕ್ಷದ ಸ್ನೇಹಿತರು ನಾವೂ ಒಂದಷ್ಟು ವಿಚಾರ ಹೇಳುವುದಿದೆ ಎಂದು ಹೇಳಿದ್ದರು. ದುರಾದೃಷ್ಟ ಅವರು ಇವತ್ತೂ ಕೂಡ ಸದನದಲ್ಲಿಲ್ಲ. ಇದು ಬಹಳ ಅಗತ್ಯವಾಗಿ ಆಗಬೇಕಾಗಿರುವ ಒಂದು ಅಧಿಶಾಸನ. ಕರ್ನಾಟಕ ವಿಶ್ವವಿದ್ಯಾನಿಲಯಗಳು ಏನಿವೆ, ಅವುಗಳಿಗೆ ಒಂದಷ್ಟು ಸ್ಪರ್ಧಾತ್ಮಕ ಮನೋಭಾವನೆ ಬೆಳೆಸಲಿಕ್ಕೋಸ್ಕರ ಈಗ ಮೊದಲನೆಯದಾಗಿ ನಾವು ರಾಜ್ಯದಲ್ಲಿ ನವೀನಾತ್ಮಕ ವಿಶ್ವವಿದ್ಯಾನಿಲಯ, (Innovative Universities) ಗಳಾಗಿ Karnataka ವಿಶ್ವವಿದ್ಯಾನಿಲಯ, ಧಾರವಾಡ ಮತ್ತು ಮೈಸೂರಿನಲ್ಲಿ ಅಳವಡಿಸುವುದಕ್ಕೋಸ್ಕರ ಈ ಒಂದು ಬಿಲ್ ಅನ್ನು, ಈ ಅಧಿಶಾಸನವನ್ನು ತರುತ್ತಿದ್ದೇವೆ. ಇವತ್ತಿನ ಸ್ಪರ್ಧಾತ್ಮಕ ಯುಗವೇನಿದೆ ಈ ಸ್ಪರ್ಧಾತ್ಮಕ ಯುಗದಲ್ಲಿ ವಿಶೇಷವಾಗಿ ಕರ್ನಾಟಕ ರಾಜ್ಯದಲ್ಲಿ ಉನ್ನತ ಶಿಕ್ಷಣದ ಅಭಿವೃದ್ಧಿಯಾಗಬೇಕು, ಇಡೀ ದೇಶದಲ್ಲಿ ನಮ್ಮ University ಯಿಂದ ಬರುವ ವಿದ್ಯಾರ್ಥಿಗಳು ಯಾವುದೇ ಸ್ಪರ್ಧೆಯಲ್ಲಿ ವಿಜಯಗಳಿಸುವ ಒಂದು ವಾತಾವರಣವನ್ನು ನಿರ್ಮಾಣ ಮಾಡಬೇಕೆನ್ನುವುದೇ ಈ ಅಧಿ ಶಾಸನದ ಮುಖ್ಯ ಉದ್ದೇಶವಾಗಿದೆ. ಜೊತೆಗೆ ಆಗಾಗ ನಾವು ಓದುತ್ತಿದ್ದೇವೆ, ಕೇಳುತ್ತಿದ್ದೇವೆ. ಶೈಕ್ಷಣಿಕ ಸಂಶೋಧನೆ ಏನಿದೆ, ಆ ಶೈಕ್ಷಣಿಕ ಸಂಶೋಧನೆಯಲ್ಲಿ ಗುಣಮಟ್ಟ ಕುಸಿಯುತ್ತಿದೆ ಎಂದು ಪದೇ ಪದೇ ಕೇಳುತ್ತಿದ್ದೇವೆ. ಕುಸಿಯುತ್ತಿರುವ ಶೈಕ್ಷಣಿಕ ಸಂಶೋಧನೆ ಗುಣಮಟ್ಟವನ್ನು ನಿಯಂತ್ರಿಸಬೇಕು, ಅದನ್ನೂ ಕೂಡ ಮೇಲುಸ್ತರಕ್ಕೆ ತರಬೇಕೆನ್ನುವುದು ಉದ್ದೇಶವಾಗಿದೆ. ಜೊತೆಗೆ, ಈ ಮೂರೂ ವಿಶ್ವವಿದ್ಯಾನಿಲಯಗಳಲ್ಲಿ ವಿಕೇಂದ್ರಿಕರಣದ ಮೂಲಕ ಮತ್ತು Education and Administrative (ಶೈಕ್ಷಣಿಕ ಮತ್ತು ಆಡಳಿತಾತ್ಮಕ) ಪ್ರಕಾರ್ಯಗಳನ್ನು ಪ್ರತ್ಯೇಕಗೊಳಿಸುವ ಮೂಲಕ ಈ ವಿಶ್ವವಿದ್ಯಾನಿಲಯಗಳಿಗೆ ಅಗತ್ಯ ಸ್ವಾಯತ್ತತೆ (Autonomy) ಬರಬೇಕೆನ್ನುವುದೂ ಮುಖ್ಯ ಉದ್ದೇಶವಾಗಿದೆ. ಈ ಮಹತ್ತರ ಉದ್ದೇಶಗಳಿಂದ ಈ ಮಹತ್ತರ Bill ಅನ್ನು ತಂದಿದ್ದೇವೆ. ನಾನು ತಮ್ಮನ್ನು ಕೇಳುತ್ತಿದ್ದೇನೆ. ಬಹಳ ದಿವಸಗಳಿಂದ ಈ ಒಂದು ಶಾಸನ ಅಧಿನಿಯಮಿಸಬೇಕೆಂದು ಕಾಯುತ್ತಿದೆ. ಇದನ್ನು ಅನುಮೋದಿಸಿಕೊಡಬೇಕೆಂದು, ಸಭೆಯ ಮತಕ್ಕೆ ಹಾಕಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: ಪರ್ಯಾಯಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದುಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

ಖಂಡ 2 ರಿಂದ 72

ಅಧ್ಯಕ್ಷರು: 2 ರಿಂದ 72ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರುಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ರಿಂದ 72ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ, ಯೋಜನಾ ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿದೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಆ) ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ 2011 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು